ಅ) ಹೌದು.

ಬಂದಿದೆ.

ಆ) ಉರ್ದು ಪ್ರೌಢಶಾಲೆಯ ಅಗತ್ಯತೆಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಶ್ರೀ ಜಿ.ಟಿ. ಪಾಟೀಲ್ :- ಸನ್ಮಾನ್ಯ ಅಧ್ಯಕ್ಷರೇ, ಬೀಳಗಿ ತಾಲ್ಲೂಕಿನಲ್ಲಿ ಇಲ್ಲಿಯವರೆಗೆ ಒಂದೂ ಉರ್ದು ಮಾಧ್ಯಮದ ಶಾಲೆಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಎಂದು ಕೇಳಿದಕ್ಕೆ ಹೌದು ಎಂದು ಹೇಳಿದ್ದಾರೆ. ಆದಕಾರಣ 1996-97 ನೇ ಸಾಲಿನಲ್ಲಿ ಈ ಉರ್ದು ಪ್ರೌಢಶಾಲೆಯನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಹೆಚ್. ಜಿ. ಗೋವಿಂದೇಗೌಡ :- ಮಾನ್ಯ ಅಧ್ಯಕ್ಷರೇ, ಈಗಾಗಲೇ ಹಿರೇಕಲ್ಲು ಎನ್ನತಕ್ಕಂಥ ಜಾಗಕ್ಕೆ ಒಂದು ಕನ್ನಡದ ಪ್ರೌಢಶಾಲೆಯನ್ನು ಕೊಟ್ಟಿದ್ದೇವೆ. ಇನ್ನೂ ಒಂದು ಉರ್ದು ಪ್ರೌಢಶಾಲೆ ಬೇಕು ಎಂದು ಮಾನ್ಯ ಸದಸ್ಯರು ನನ್ನ ಹತ್ತಿರ ಅನೇಕ ಸಾರಿ ಬಂದು ಕೇಳಿದ್ದಾರೆ. ಈ ವರ್ಷದ ಪರಿಸ್ಥಿತಿಯಲ್ಲಿ ಅಲ್ಲಿ ಉರ್ದು ಪ್ರೌಢಶಾಲೆಯನ್ನು ಒದಗಿಸತಕ್ಕಂಥ ಸ್ಥಿತಿಯಲ್ಲಿಲ್ಲ. ಮುಂದೆ ಆದನ್ನು ಪರಿಶೀಲನೆ ಮಾಡಿ ನೋಡತಕ್ಕಂಥ ವ್ಯವಸ್ಥೆ ಮಾಡುತ್ತೇವೆ.

ವಿಷಯ :- ವಿಜಾಪುರ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಹಿಂದಿ ಮತ್ತು ಜೀವಶಾಸ್ತ್ರ ಉಪನ್ಯಾಸಕರ ಕೊರತೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 267 (1724)

ಶ್ರೀ ಬಸನಗೌಡ ರಾ. ಪಾಟೀಲ (ಬಿಜಾಪುರ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪುರ ನಗರದಲ್ಲಿರುವ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ ಕಳೆದ ಎರಡು ವರ್ಷಗಳಿಂದ ಹಿಂದಿ ಮತ್ತು ಜೀವಶಾಸ್ತ್ರ ಉಪನ್ಯಾಸಕರು ಇರದೇ ವಿದ್ಯಾರ್ಥಿಗಳಿಗೆ ತೀವ್ರ ಅಭ್ಯಾಸದ ಮೇಲೆ ದುಷ್ಪರಿಣಾಮವಾಗುತ್ತಿರುವ ವಿಷಯ ಸರಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಎರಡು ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :-

ಆ) ಹೌದು.

ಈ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ 864 ಉಪನ್ಯಾಸಕರುಗಳ ಹುದ್ದೆಗಳನ್ನು ತುಂಬಲು ಕೆಪಿಎಸ್‌ಸಿ ಮೂಲಕ ಅಭ್ಯರ್ಥಿಗಳ ಆಯ್ಕೆಯ ಪ್ರಕ್ರಿಯೆ ನಡೆಯುತ್ತಿದ್ದು, ಆಯ್ಕೆಯಾದ ಅಭ್ಯರ್ಥಿಗಳ ಯಾದಿ ಬಂದ ತಕ್ಷಣ ಖಾಲಿ ಇರುವ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

ಶ್ರೀ ಬಸನಗೌಡ ರಾ. ಪಾಟೀಲ್ :- ಸನ್ಮಾನ್ಯ ಅಧ್ಯಕ್ಷರೇ, ವಿಜಾಪುರ ನಗರದಲ್ಲಿರುವ ಸರಕಾರೀ ಪದವಿಪೂರ್ವ ಕಾಲೇಜಿನಲ್ಲಿ ಕಳೆದ ಎರಡು ವರ್ಷಗಳಿಂದ ಹಿಂದಿ ಮತ್ತು ಜೀವಶಾಸ್ತ್ರ ಉಪನ್ಯಾಸಕರು ಇರದೇ ವಿದ್ಯಾರ್ಥಿಗಳಿಗೆ ತೀವ್ರ ಅಭ್ಯಾಸದ ಮೇಲೆ ದುಷ್ಪರಿಣಾಮವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ಎಂದು ಕೇಳಿದರೆ ಸಚಿವರು "ಹೌದು" ಎಂದು ಒಪ್ಪಿಕೊಂಡಿದ್ದಾರೆ. ಆದರೆ ಇಡೀ ರಾಜ್ಯದಲ್ಲಿ ಇಂತಹ 864 ಹುದ್ದೆಗಳನ್ನು ತುಂಬಬೇಕಾಗಿದೆ ವಿಶೇಷವಾಗಿ ಸರ್ಕಾರಿ ಶಾಲೆಗಳಲ್ಲಿ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜನಾಂಗದ ವಿದ್ಯಾರ್ಥಿಗಳು ಓದುವಂಥ ಶಾಲೆಗಳಾದ್ದರಿಂದ ತಕ್ಷಣ ಆ ಖಾಲಿ ಬಿದ್ದಿರುವಂಥ ಹುದ್ದೆಗಳನ್ನು ತುಂಬುವಂಥ ಕೆಲಸವನ್ನು ಯಾವಾಗ ಮಾಡುತ್ತೀರಿ?

ಅಧ್ಯಕ್ಷರು :- ಉತ್ತರವನ್ನು ಓದಿಕೊಳ್ಳಿ, ಉತ್ತರದಲ್ಲಿ ಹೇಳಿದ್ದಾರೆ.

ಶ್ರೀ ಬಸನಗೌಡ ರಾ. ಪಾಟೀಲ್ :- ಆಯ್ಕೆಯಾದ ಅಭ್ಯರ್ಥಿಗಳ ಯಾದಿ ಬಂದ ನಂತರ ತಕ್ಷಣ ಖಾಲಿ ಇರುವ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು ಎಂದು ಕೊಟ್ಟಿದ್ದಾರೆ.

ಅಧ್ಯಕ್ಷರು :- ಸಧ್ಯ ಲೋಕಸೇವಾ ಆಯೋಗದಲ್ಲಿ ಸಂದರ್ಶನ ನಡೆಯುತ್ತಿದೆ. ಅವರು ಅಲ್ಲಿ ಸೆಲೆಕ್ಟ್ ಮಾಡಿ ಪಟ್ಟಿ ಕಳುಹಿಸಿದ ತಕ್ಷಣ ಪೋಸ್ಟಿಂಗ್ಸ್ ಕೊಡುತ್ತಾರೆ.

ಶ್ರೀ ಬಸನಗೌಡ ರಾ. ಪಾಟೀಲ್ :- ಪ್ರಸಕ್ತ ಸಾಲಿನ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಸರ್ಕಾರ ಕ್ರಮ ಕೈಗೊಳ್ಳುತ್ತಿದೆಯೇ ಅಥವಾ ಮುಂದಿನ ವರ್ಷದ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸರ್ಕಾರ ಕ್ರಮ ಕೈಗೊಳ್ಳುತ್ತಿದೆಯೇ?

ಶ್ರೀ ಹೆಚ್. ಜಿ. ಗೋವಿಂದೇಗೌಡ :- ಸನ್ಮಾನ್ಯ ಅಧ್ಯಕ್ಷರೇ, ಈಗಾಗಲೇ ಉತ್ತರದಲ್ಲಿ 864 ಉಪನ್ಯಾಸಕರ ನೇಮಕಾತಿ ಮಾಡತಕ್ಕಂಥ ಹಂತ ಪೂರೈಸುತ್ತಿದ್ದೇವೆಂದು ತಿಳಿಸಲಾಗಿದೆ. ಇನ್ನೊಂದು ತಿಂಗಳೊಳಗಾಗಿ ಈ ಎಲ್ಲಾ ಉಪಾಧ್ಯಾಯರುಗಳನ್ನು ನೇಮಕಾತಿ ಮಾಡಿ ರಾಜ್ಯಾದ್ಯಂತ ಎಲ್ಲೆಲ್ಲಿ ಖಾಲಿ ಇವೆ ಅಲ್ಲಿ ನೇಮಕ ಮಾಡತಕ್ಕಂಥ ವ್ಯವಸ್ಥೆ ಮಾಡುತ್ತೇವೆ.